ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ.: 2419222/2419567
ಫ್ಯಾಕ್ಸ: 0821-2419363/2419301

e-mail: registrar@uni-mysore.ac.in
www.uni-mysore.ac.in

ಮೈಸೂರು ವಿಶ್ವವಿದ್ಯಾನಿಲಯ
ಸ್ಥಾಪನೆ: 1916

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

(Re-accredited by NAAC at "A" Grade with a CGPA of 3.47)
(NIRF-2020 Ranked 27 in University Category & 47 in Overall Category)

ಸಂಖ್ಯೆ: PMEB-1/43/Admission/2020-21

ದಿನಾಂಕ: 23-09-2020.

# ಅಧಿಸೂಚನೆ

**ವಿಷಯ:** ಮೈಸೂರು ವಿಶ್ವವಿದ್ಯಾನಿಲಯದ ಮಾನ್ಯತೆ ಪಡೆದು Specialized Program ಅಡಿಯಲ್ಲಿನ ವಿವಿಧ ಕೋರ್ಸ್‌ಗಳಿಗೆ 2020-21ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿ ಬಗ್ಗೆ.

*****

ಮೈಸೂರು ವಿಶ್ವವಿದ್ಯಾನಿಲಯದ ಮಾನ್ಯತೆ ಪಡೆದು Specialized Program ಅಡಿಯಲ್ಲಿ ವಿವಿಧ ಕೋರ್ಸ್‌ಗಳನ್ನು ನಡೆಸುತ್ತಿರುವ ಸಂಸ್ಥೆಗಳಲ್ಲಿ (ಮೈಸೂರು ವಿಶ್ವವಿದ್ಯಾನಿಲಯದ ಭೌಗೋಳಿಕ ವ್ಯಾಪ್ತಿಗೆ ಒಳಪಡುವ ವಿದ್ಯಾಸಂಸ್ಥೆಗಳು) 2020-21ನೇ ಶೈಕ್ಷಣಿಕ ಸಾಲಿಗೆ ಸ್ನಾತಕ/ಸ್ನಾತಕೋತ್ತರ ಪದವಿ ಕೋರ್ಸ್‌ಗಳಿಗೆ ಪ್ರವೇಶ ಮಾಡಿಕೊಳ್ಳಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

| | |
|---|---|
| **ಪ್ರವೇಶಾತಿಗೆ ನಿಗದಿಪಡಿಸಿರುವ ಕೊನೆಯ ದಿನಾಂಕ ದಂಡ ಶುಲ್ಕವಿಲ್ಲದೆ** | **12-10-2020** |
| **ಪ್ರವೇಶಾತಿಗೆ ನಿಗದಿಪಡಿಸಿರುವ ಕೊನೆಯ ದಿನಾಂಕ ರೂ.1000/-ಗಳ ದಂಡ ಶುಲ್ಕದೊಂದಿಗೆ** | **29-10-2020** |

1. ಕೋವಿಡ್-19(ಕೋರೋನಾ ವೈರಸ್) ನಿಯಂತ್ರಿಸುವ ಪ್ರಯುಕ್ತ ವಿದ್ಯಾರ್ಥಿಗಳು/ಪೋಷಕರು ಪ್ರವೇಶಾತಿ ಸಂದರ್ಭದಲ್ಲಿ ಸಮಾಜಿಕ ಅಂತರ ಕಾಯ್ದುಕೊಳ್ಳುವುದು, ಮಾಸ್ಕ್ ಧರಿಸುವುದು ಮತ್ತು ಸ್ಯಾನಿಟೈಸರ್ ಕಡ್ಡಾಯವಾಗಿ ಬಳಸುವ ಬಗ್ಗೆ ಅರಿವು ಮೂಡಿಸಲು ತಿಳಿಸಲಾಗಿದೆ.
2. ತಮ್ಮ ಸಂಸ್ಥೆಗಳಿಗೆ ಸಂಬಂಧಿಸಿದ ಶೈಕ್ಷಣಿಕ ವೇಳಾಪಟ್ಟಿಯನ್ನು ಸಿದ್ಧಪಡಿಸಿ ವಿಶ್ವವಿದ್ಯಾನಿಲಯದ ಅನುಮೋದನೆಗೆ ಸಲ್ಲಿಸುವುದು ಹಾಗೂ ಅನುಮೋದನೆ ಪಡೆದ ನಂತರ ವಿದ್ಯಾರ್ಥಿ ಪ್ರವೇಶಾತಿ ಪಟ್ಟಿಯನ್ನು ಅನುಮೋದನೆಗೆ ಸಲ್ಲಿಸಬೇಕು.
3. ಪ್ರವೇಶಾತಿಗೆ ನಿಗದಿಪಡಿಸಿರುವ ಕೊನೆಯ ದಿನಾಂಕಗಳ ನಂತರ ಪ್ರವೇಶಾತಿ ಮಾಡಿಕೊಳ್ಳಬಾರದೆಂದು ಸೂಚಿಸಲಾಗಿದೆ.
4. ಅನುಮೋದನೆಗೊಂಡಿರುವ ಕೋರ್ಸ್‌ಗಳಿಗೆ ಹಾಗೂ ಸಂಖ್ಯಾಮಿತಿಯೊಳಗೆ ಮಾತ್ರ ಪ್ರವೇಶಾತಿ ನೀಡತಕ್ಕದ್ದು ಮತ್ತು ಪ್ರವೇಶಾತಿ ಅನುಮೋದನೆ ಕೋರುವ ಸಂದರ್ಭದಲ್ಲಿ ವಿಶ್ವವಿದ್ಯಾನಿಯದಿಂದ ಮಾನ್ಯತೆ ಪಡೆದಿರುವ ಬಗ್ಗೆ ಆದೇಶದ ಪ್ರತಿಯನ್ನು ತಪ್ಪದೇ (ಕಡ್ಡಾಯವಾಗಿ) ಪ್ರವೇಶಾತಿ ಪಟ್ಟಿಯ ಜೊತೆ ಲಗತ್ತಿಸಿರಬೇಕು. ಪ್ರತಿ ಇಲ್ಲವಾದಲ್ಲಿ, ಪ್ರವೇಶಾತಿ ಅನುಮೋದನೆಗಾಗಿ ಪಟ್ಟಿಗಳನ್ನು ಸ್ವೀಕರಿಸಲಾಗುವುದಿಲ್ಲ.
5. ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ ವಿವಿಧ ಶುಲ್ಕಗಳನ್ನು ವಿಶ್ವವಿದ್ಯಾನಿಲಯಕ್ಕೆ ಪಾವತಿಸದಿದ್ದಲ್ಲಿ, ಅಂತಹ ಪ್ರವೇಶಾತಿಗಳನ್ನು ಅನುಮೋದಿಸಲಾಗುವುದಿಲ್ಲ.
6. ವಿದ್ಯಾರ್ಥಿಗಳ ಪ್ರವೇಶ ಪಟ್ಟಿ, ಅಂಕಿ ಅಂಶಗಳ ಪಟ್ಟಿಗಳನ್ನು ಹಾಗೂ ಚಲನ್‌ಗಳ ಪ್ರತಿಗಳನ್ನು ಪ್ರತ್ಯೇಕವಾಗಿ ಸಿದ್ಧಪಡಿಸಿ ತ್ರಿಪ್ರತಿಗಳಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕು.
7. **ಶುಲ್ಕ ಪಾವತಿಸುವ ವಿಧಾನ :**

   ಶುಲ್ಕ ಪಾವತಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಗಳವರೆಗೆ ಪಾವತಿಸಲಾಗಿರುವ ಒಟ್ಟು ಶುಲ್ಕವನ್ನು, ದಂಡಶುಲ್ಕ ಒಳಗೊಂಡಂತೆ ಪ್ರವೇಶಾತಿ ಕಡೆಯ ದಿನಾಂಕದ ನಂತರ ವಿಶ್ವವಿದ್ಯಾನಿಲಯದ ಸಹೋದ್ಯಮ ಕೋರ್ಸು (Collaboration Courses) ಖಾತೆಗೆ ಜಮಾ ಆಗುವಂತೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಬ್ಯಾಂಕಿನ ಶಾಖೆಯಲ್ಲಿ ಶುಲ್ಕಗಳನ್ನು ತಪ್ಪದೆ ಪಾವತಿಸಿರಬೇಕು. ಪ್ರವೇಶಾತಿ ಅನುಮೋದನೆ ಪಟ್ಟಿಯೊಂದಿಗೆ ಹಣ ಸಂದಾಯದ ಸಂಬಂಧ ದಾಖಲೆ ಸಲ್ಲಿಸಬೇಕು.
8. ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕಾಗಿರುವ ದಾಖಲಾತಿಗಳನ್ನು ಅನುಕ್ರಮವಾಗಿ ಜೋಡಿಸಿ ತಪ್ಪದೆ ಸಲ್ಲಿಸಬೇಕು.
9. ಪ್ರವೇಶಾತಿ ವಿಧಿ ವಿಧಾನಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಈ ಬಗ್ಗೆ ವಿಶ್ವವಿದ್ಯಾನಿಲಯದ ನಿಯಮಗಳನ್ನು ಉಲ್ಲಂಘಿಸದಂತೆ ಕ್ರಮವಹಿಸುವುದು.

ಪು.ತಿ.ನೋ...

10. ಯು.ಜಿ.ಸಿ., ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಲೋಕಸಭೆಯ ಸದಸ್ಯರುಗಳು ಆಗಿಂದಾಗ್ಗೆ ಕೋರುವ ಒಟ್ಟು ವಿದ್ಯಾರ್ಥಿಗಳ (ಜಾತಿ/ಉಪಜಾತಿ/ವರ್ಗವಾರು) ಸಂಖ್ಯೆಗಳನ್ನು ಇತರೆ ಅಂಶಗಳನ್ನು ಒದಗಿಸುವ ನಮೂನೆಗಳಲ್ಲಿ ಅಂಕಿ ಅಂಶಗಳ ಮಾಹಿತಿಗಳನ್ನು ಖಚಿತವಾಗಿ ನೀಡಬೇಕು. ಕಾಲೇಜು/ಸಂಸ್ಥೆಯ ವತಿಯಿಂದ ನೀಡಿದ/ನೀಡಲಾದ ಮಾಹಿತಿಯಲ್ಲಿ ತಪ್ಪುಗಳಿದ್ದಲ್ಲಿ ಸಂಸ್ಥೆಯ ನಿರ್ದೇಶಕರು/ಪ್ರಾಂಶುಪಾಲರೇ ಹೊಣೆಗಾರರಾಗಿರುತ್ತಾರೆ.
11. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ 2000, ಪ್ರಕರಣ 61ರಂತೆ ಪ್ರವೇಶಾತಿ ಅನುಮೋದನೆಯಾಗದ ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಳ್ಳಲು ಅರ್ಹರಾಗಿರುವುದಿಲ್ಲ. ಈ ನಿಯಮವನ್ನು ಕಾಲೇಜು/ಸಂಸ್ಥೆಯ ನಿರ್ದೇಶಕರು/ಪ್ರಾಂಶುಪಾಲರು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಮೇಲಿನ ಎಲ್ಲಾ ಸೂಚನೆ/ನಿಯಮಗಳನ್ನು ಕಾಲೇಜು/ಸಂಸ್ಥೆಯವರು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

25.9.2020

ಕುಲಸಚಿವ

ಇವರಿಗೆ;

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿ ಒಳಗೆ ಎಲ್ಲಾ Specialized/Specified Programಗಳ ಕಾಲೇಜು/ಸಂಸ್ಥೆಗಳ ಪ್ರಾಂಶುಪಾಲರು/ನಿರ್ದೇಶಕರುಗಳಿಗೆ – **ಸೂಕ್ತ ಕ್ರಮಕ್ಕಾಗಿ.**
2. ಕುಲಸಚಿವ (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು – ಪ್ರವೇಶಾತಿ ಅನುಮೋದನೆ ಪಡೆದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷಾ ಪ್ರವೇಶ ಪತ್ರಗಳನ್ನು ವಿತರಿಸುವಂತೆ ಸಂಬಂಧಪಟ್ಟ ಸಿಬ್ಬಂದಿಗಳಿಗೆ ಸೂಚಿಸಲು ತಿಳಿಸಿದೆ.
3. ನಿರ್ದೇಶಕರು, ಐಸಿಡಿ, ಗಣಕವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು. – ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಬೇಕಾಗಿ ಕೋರಿದೆ.
4. ಸಂಬಂಧಪಟ್ಟ ಉಪಕುಲಸಚಿವ/ ಸಹಾಯಕ ಕುಲಸಚಿವ/ ಅಧೀಕ್ಷಕರು, ಪರೀಕ್ಷಾ ವಿಭಾಗದ Specialized Program ಕಾರ್ಯನಿರ್ವಾಹಕರಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಮಾನ್ಯ ಕುಲಪತಿಗಳ/ಕುಲಸಚಿವರ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳ ಆಪ್ತ ಸಹಾಯಕರು, ಮೈ.ವಿ.ವಿ. ನಿಲಯ, ಮೈಸೂರು.
6. ಕಛೇರಿ ಪ್ರತಿ.